# ಕರ್ನಾಟಕ ವಿಧಾನ ಪರಿಷತ್ತು

1. **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 798
2. **ಸದಸ್ಯರ ಹೆಸರು** : ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು)
3. **ಉತ್ತರಿಸಬೇಕಾದ ದಿನಾಂಕ** : 12.12.2025
4. **ಉತ್ತರಿಸುವವರು** : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮತ್ತು ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | (ಅ) ರಾಜ್ಯದಲ್ಲಿ ಒಟ್ಟು ಖಾಲಿಯಿರುವ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗಳ ಸಂಖ್ಯೆ ಎಷ್ಟು; | ರಾಜ್ಯದಲ್ಲಿ, ಪ್ರಸ್ತುತ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಗೆ ಒಳಪಡುವ ವಿವಿಧ ತಾಲ್ಲೂಕು ಪಂಚಾಯಿತಿಗಳಲ್ಲಿ ಸುಮಾರು 80ಕ್ಕೂ ಹೆಚ್ಚು ಕಾರ್ಯನಿರ್ವಾಹಕ ಅಧಿಕಾರಿ/ಸಹಾಯಕ ಕಾರ್ಯದರ್ಶಿ ಹುದ್ದೆಗಳು ಖಾಲಿ ಇರುತ್ತದೆ. |
| (ಆ) | ಸದರಿ ಖಾಲಿ ಹುದ್ದೆಗಳಿಗೆ ಬೇರೆ ಇಲಾಖೆಗಳಿಂದ ನಿಯೋಜನೆ ಮೇರೆಗೆ ಅಧಿಕಾರಿಗಳು ಬಂದು ಕರ್ತವ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು.<br>ತಾಲ್ಲೂಕು ಪಂಚಾಯಿತಿ ಕಛೇರಿಗಳ ಆಡಳಿತಾತ್ಮಕ ಕಾರ್ಯಗಳಿಗೆ ಅಡಚಣೆಯಾಗದಂತೆ ಕಾರ್ಯನಿರ್ವಹಿಸುವ ನಿಟ್ಟಿನಲ್ಲಿ, ತಾಲ್ಲೂಕು ಪಂಚಾಯಿತಿಗಳಲ್ಲಿ ಖಾಲಿ ಇರುವ ಕಾರ್ಯನಿರ್ವಾಹಕ ಅಧಿಕಾರಿ/ ಸಹಾಯಕ ಕಾರ್ಯದರ್ಶಿ ಹುದ್ದೆಗಳ ಪೈಕಿ ಕೆಲವು ಹುದ್ದೆಗಳಿಗೆ ಇತರೆ ಇಲಾಖೆಯ ಅಧಿಕಾರಿಗಳನ್ನು ನಿಯೋಜನೆ ಮೇಲೆ ಹಾಗೂ ಬಹುತೇಕ ಹುದ್ದೆಗಳಿಗೆ ಗ್ರಾ.ಅ & ಪಂ.ರಾಜ್ ಇಲಾಖೆ ಸೇವೆಗೆ ಸೇರಿದ ಸಹಾಯಕ ನಿರ್ದೇಶಕರುಗಳನ್ನು ಹೆಚ್ಚುವರಿ ಪ್ರಭಾರದಲ್ಲಿ ನೇಮಕ ಮಾಡಲಾಗಿರುತ್ತದೆ. |
| (ಇ) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಹಲವಾರು ಹಿರಿಯ ಸಹಾಯಕ ನಿರ್ದೇಶಕರುಗಳು ಕರ್ತವ್ಯ ನಿರ್ವಹಿಸುತ್ತಿದ್ದು,<br><br>ಸದರಿಯವರುಗಳಿಗೆ ಹಾಲಿ ಖಾಲಿಯಿರುವ ಕಾರ್ಯನಿರ್ವಾಹಕ ಹುದ್ದೆಗೆ ಬಡ್ತಿ/ಪ್ರಭಾರ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ: | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಹಿರಿಯ ಸಹಾಯಕ ನಿರ್ದೇಶಕರ ವೃಂದದ ಹುದ್ದೆ ಇರುವುದಿಲ್ಲವಾದ್ದರಿಂದ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗೆ ಬಡ್ತಿ ನೀಡಲು ಅವಕಾಶ ಇರುವುದಿಲ್ಲ. ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗೆ ಮುಂಬಡ್ತಿ ನೀಡಲು ಪೋಷಕ ವೃಂದವು ಸಹಾಯಕ ನಿರ್ದೇಶಕರ ಹುದ್ದೆಯಾಗಿದ್ದು, ಸಹಾಯಕ ನಿರ್ದೇಶಕರ ಹುದ್ದೆಗೆ ಮುಂಬಡ್ತಿ ನೀಡಲು ಪೋಷಕ ವೃಂದವು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಯಾಗಿದ್ದು, ಈ ವೃಂದದ ಜೇಷ್ಠತಾ ಪಟ್ಟಿ ಅಂತಿಮಗೊಂಡ ನಂತರ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲಾಗುವುದು.<br>ಪ್ರಸ್ತುತ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದ ಜೇಷ್ಠತಾ ಪಟ್ಟಿಗೆ ಸಂಬಂಧಿಸಿದಂತೆ ಪ್ರಕರಣವು ಮಾನ್ಯ ಕರ್ನಾಟಕ ಉಚ್ಚ |
| ಈ | ಬೇರೆ ಇಲಾಖೆಯ ಅಧಿಕಾರಿಗಳನ್ನು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಾಗಿ | |

| | | |
|---|---|---|
| | ನಿಯೋಜಿಸುವುದನ್ನು ನಿಲ್ಲಿಸಿ, ಹಾಲಿಯಿರುವ ಹಿರಿಯ ಸಹಾಯಕ ನಿರ್ದೇಶಕರಿಗೆ ಯಾವ ಕಾಲಮಿತಿಯೊಳಗೆ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಹುದ್ದೆಗೆ ಮುಂಬಡ್ತಿ/ಪ್ರಭಾರದಲ್ಲಿರಿಸಿ ಆದೇಶ ಹೊರಡಿಸಲಾಗುವುದು? | ನ್ಯಾಯಾಲಯದಲ್ಲಿ ಬಾಕಿ ಇದ್ದು, ಈಗಾಗಲೇ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಸಂಬಂಧಿಸಿದಂತೆ ಪ್ರಕಟಿಸಿರುವ ಕರಡು ಜೇಷ್ಠತಾ ಪಟ್ಟಿ ಕುರಿತು ಮುಂದಿನ ಯಾವುದೇ ಕ್ರಮ ವಹಿಸಬಾರದೆಂದು ಮಾನ್ಯ ನ್ಯಾಯಾಲಯದ ನಿರ್ದೇಶನವಿದ್ದು, ಮಾನ್ಯ ನ್ಯಾಯಾಲಯದ ಅಂತಿಮ ಆದೇಶವನ್ನು ನಿರೀಕ್ಷಿಸಲಾಗಿದೆ.<br><br>ಅದರಂತೆ, ಮಾನ್ಯ ನ್ಯಾಯಾಲಯದ ಅಂತಿಮ ಆದೇಶದ ನಂತರ ಪೋಷಕ ವೃಂದವಾದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ವೃಂದದ ಜೇಷ್ಠತಾ ಪಟ್ಟಿ ಅಂತಿಮಗೊಂಡ ನಂತರ ಸದರಿ ಅಂತಿಮ ಜೇಷ್ಠತಾ ಪಟ್ಟಿಯನ್ನು ಆಧರಿಸಿ, ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಅರ್ಹ ಸಹಾಯಕ ನಿರ್ದೇಶಕರುಗಳಿಗೆ ಕಾರ್ಯನಿರ್ವಾಹಕ ಅಧಿಕಾರಿ ವೃಂದದ ಹುದ್ದೆಗಳಿಗೆ ನಿಯಮಾನುಸಾರ ಮುಂಬಡ್ತಿ ನೀಡಲು ಕ್ರಮವಹಿಸಬೇಕಾಗಿದೆ. |

ಸಂಖ್ಯೆ: ಗ್ರಾಅಪ 274 ಪಬವ 2025 (ಇ)

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು